ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೆರೆ ಸಂಜೀವಿನಿ-3 ಕಾರ್ಯಕ್ರಮದಡಿ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕಿನ ಬೆನಕನಹಳ್ಳಿ ಗ್ರಾಮದ ಕೆರೆ ಅಭಿವೃದ್ಧಿ ಪಡಿಸುವ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆದೇಶ.

ಪ್ರಸ್ತಾವನೆ:

ಕೆರೆ ಸಂಜೀವಿನಿ-3 ಕಾರ್ಯಕ್ರಮದಡಿ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕಿನ ಬೆನಕನಹಳ್ಳಿ ಗ್ರಾಮದ ಕೆರೆ ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಲು ಅನುದಾನ ಬಿಡುಗಡೆಗೊಳಿಸುವಂತೆ ಬಂದಿರುವ ಪ್ರಸ್ತಾವನೆಯನ್ನು ಗಮನಿಸಿದೆ.

ಪ್ರಸ್ತಾವಿತ ಕಾರ್ಯಕ್ರಮದಡಿ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕಿನ ಬೆನಕನಹಳ್ಳಿ ಗ್ರಾಮದ ಕೆರೆ ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ: 181/18:ಆರ್‌ಆರ್‌ಸಿ:2017, ಬೆಂಗಳೂರು, ದಿನಾಂಕ: 22-9-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಕೆರೆ ಸಂಜೀವಿನಿ-3 ಕಾರ್ಯಕ್ರಮದಡಿ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕಿನ ಬೆನಕನಹಳ್ಳಿ ಗ್ರಾಮದ ಕೆರೆ ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು **ರೂ.10.00 ಲಕ್ಷಗಳ** (ರೂಪಾಯಿಗಳು ಹತ್ತು ಲಕ್ಷಗಳು ಮಾತ್ರ) ಅನುದಾನದಲ್ಲಿ ಕೈಗೊಳ್ಳಲು ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

ಷರತ್ತುಗಳು:

1. ಕೆರೆ ಸಂಜೀವಿನಿ-3 ಕಾರ್ಯಕ್ರಮದಡಿ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕಿನ ಬೆನಕನಹಳ್ಳಿ ಗ್ರಾಮದ ಕೆರೆ ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು ತುರ್ತು ಹಾಗೂ ಅಗತ್ಯತೆ ಆಧಾರದ ಮೇರೆಗೆ ಹಂಚಿಕೆ ಮಿತಿಗೊಳಪಟ್ಟು ಪಂ.ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಅನುಷ್ಠಾನಗೊಳಿಸತಕ್ಕದ್ದು.
2. ಕೆರೆ ಸಂಜೀವಿನಿ-3 ಯೋಜನೆಯನ್ನು ಅನುಷ್ಠಾನಗೊಳಿಸುವ ಸಮಯದಲ್ಲಿ ಮಳೆ ಬಂದ ಸಮಯದಲ್ಲಿ ಕಾಮಗಾರಿಗಳನ್ನು ಅಷ್ಟಕ್ಕೆ ಸ್ಥಗಿತಗೊಳಿಸಿ ಅಲ್ಲಿಯವರೆಗಿನ ವೆಚ್ಚ ಮಾತ್ರ ಮಾಡುವ ಷರತ್ತಿಗೊಳಪಟ್ಟು ಅಭಿವೃದ್ಧಿಪಡಿಸುವುದು.
3. ಬಿಲ್ಲುಗಳನ್ನು ಪಾವತಿಸುವ ಸಂದರ್ಭದಲ್ಲಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕೆರೆ ಸಂಜೀವಿನಿ-3 ಕಾರ್ಯಕ್ರಮದ ಪ್ರಗತಿಯ ವಿವರಗಳು, ಬಿಲ್ ವಿವರಗಳನ್ನು ಕಡ್ಡಾಯವಾಗಿ ನಮೂದಿಸಿ ಪಾವತಿ ಮಾಡತಕ್ಕದ್ದು.
4. ಆಯ್ಕೆ ಮಾಡಿಕೊಂಡ ಕೆರೆಯ ಕಾಮಗಾರಿಯು ಉದ್ಯೋಗ ಖಾತ್ರಿ ಯೋಜನೆಯಡಿ ತೆಗೆದುಕೊಂಡಿರದ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ದೃಢೀಕರಿಸುವುದು
5. ಈ ಯೋಜನೆಯಡಿ ಬಿಡುಗಡೆ ಮಾಡಿದ ಅನುದಾನವನ್ನು ಕೆರೆ ಹೂಳೆತ್ತುವ ಕಾಮಗಾರಿಗಳಿಗೆ ಜೆಸಿಬಿ ಯಂತಹ ಯಂತ್ರಗಳನ್ನು ಪ್ರತಿ ಗಂಟೆಗೆ ಬಾಡಿಗೆ ಆಧಾರದ ಮೇಲೆ ಪಡೆದುಕೊಂಡಂತಹ ವೆಚ್ಚಗಳನ್ನು ಮಾತ್ರ ಭರಿಸುವುದು ಯಾವುದೇ ಕಾರಣಕ್ಕೂ ಕೆರೆ ಹೂಳು ಸಾಗಾಣಿಕೆ ವೆಚ್ಚವನ್ನು ಭರಿಸತಕ್ಕದ್ದಲ್ಲ.

6. ಆಯಾ ಜಿಲ್ಲೆಗೆ ಸಂಬಂಧಿಸಿದ ಪರಿವೀಕ್ಷಣಾ ವರದಿ, ಕಾಮಗಾರಿ ಸ್ಥಳದಲ್ಲಿ ಕಾರ್ಯಪಾಲಕ / ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು ಪರಿವೀಕ್ಷಣೆ ಮಾಡುತ್ತಿರುವ ಮೂರು ಹಂತದ ಫೋಟೋಗಳನ್ನು ಹಾಗೂ ವಿಡಿಯೋ ಚಿತ್ರೀಕರಣ ಮಾಡಿರುವುದನ್ನು ದಾಖಲಿಸಿ ಇಟ್ಟುಕೊಂಡಿರುವುದನ್ನು ಪರಿಶೀಲಿಸಿ, ಕಾಮಗಾರಿ ಗುಣಮಟ್ಟದ ಬಗ್ಗೆ ದೃಢಪಡಿಸಿಕೊಂಡು ಪಾವತಿ ಮಾಡತಕ್ಕದ್ದು.
7. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿ ವರದಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರ ಮುಖಾಂತರ ಪ್ರತಿ ಮಾಹೆ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
8. ಸದರಿ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾ ಪಂಚಾಯತ್‌ಯಿಂದ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:
1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಜಿಲ್ಲಾ ಖಜಾನಾಧಿಕಾರಿಗಳು, ಬೆಳಗಾವಿ ಜಿಲ್ಲೆ
14. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9

16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ
17. ಅಧೀಕ್ಷ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಳಗಾವಿ
18. ಕಾರ್ಯಪಾಲಕ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ವಿಭಾಗ, ಬೆಳಗಾವಿ.
19. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾಜ್ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
20. ರಕ್ಷಾ ಕಡತ / ಹೆಚ್ಚುವರಿ ಪ್ರತಿ.